# ಕರ್ನಾಟಕ ವಿಧಾನ ಪರಿಷತ್ತು

**ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಮಂಜುನಾಥ ಭಂಡಾರಿ ಇವರು ನಿಯಮ-330 ರ ಮೇರೆಗೆ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

**ವಿಷಯ:** ಭಾರತ ಸಂವಿಧಾನವು "ರಾಜ್ಯವು ಗ್ರಾಮ ಪಂಚಾಯತಿಗಳನ್ನು "ಸಂಘಟಿಸಲು ಕ್ರಮಕೈಗೊಳ್ಳತಕ್ಕದ್ದು ಮತ್ತು ಸ್ವಯಂ ಆಡಳಿತ ಘಟಕಗಳಾಗಿ ಅವು ಕೆಲಸ ಮಾಡುವುದಕ್ಕೆ ಅವಶ್ಯಕವಾಗಬಹುದಾದಂತಹ ಅಧಿಕಾರಗಳನ್ನು ಮತ್ತು ಪ್ರಾಧಿಕಾರಗಳನ್ನು ಅವುಗಳಿಗೆ ಕೊಡತಕ್ಕದ್ದು." ಎಂದು ಹೇಳಿದೆ.

ಸಂವಿಧಾನದ ಆಶಯದಂತೆ ಹಾಗೂ ರಾಜ್ಯ ನಿರ್ದೇಶಕ ತತ್ವಗಳ ಪ್ರಕರಣ 40ರಲ್ಲಿ ವಿವರಿಸಿದಂತೆ, ಗ್ರಾಮ ಪಂಚಾಯತಿಗಳು ಸ್ವಯಂ ಆಡಳಿತ ಘಟಕಗಳಾಗಿ ಕೆಲಸ ಮಾಡಲು, ರಾಜ್ಯ ಸರ್ಕಾರದ ಪ್ರತಿ ಯೋಜನೆಯನ್ನು ಸಮಾಜದ ಕಟ್ಟ ಕಡೆಯ ವ್ಯಕ್ತಿಗೆ ತಲುಪಿಸುವ ಎಲ್ಲಾ ಹಂತದ ಗ್ರಾಮೀಣ ಸ್ಥಳೀಯ ಸಂಸ್ಥೆ ಜನಪ್ರತಿನಿಧಿಗಳ ಗೌರವಧನ ಹೆಚ್ಚಿಸುವುದು ಹಾಗೂ ಪಂಚಾಯತಿ ಸಿಬ್ಬಂದಿಗಳಿಗೆ 'ಸಿ' ಮತ್ತು 'ಡಿ' ದರ್ಜೆ ಸ್ಥಾನಮಾನ ನೀಡುವುದು, ಗ್ರಾಮ ಪಂಚಾಯತಿಯಲ್ಲಿ ವಾರ್ಡಗೊಬ್ಬ ಸದಸ್ಯರಂತೆ ಕನಿಷ್ಟ 15 ಸದಸ್ಯರಿಗೊಂದು ಗ್ರಾಮ ಪಂಚಾಯತಿ ವ್ಯಾಪ್ತಿಯನ್ನು ಮಿತಗೊಳಿಸಿ, ಪಕ್ಷದ ಚಿನ್ಹೆಯಡಿ ಚುನಾವಣೆ ನಡೆಸುವುದು ಸೇರಿದಂತೆ ಗ್ರಾಮ ಸ್ವರಾಜ್ಯದ ಪರಿಕಲ್ಪನೆಯೊಂದಿಗೆ ಸ್ಥಳೀಯ ಸಂಸ್ಥೆಗಳನ್ನು ಸಬಲೀಕರಣಗೊಳಿಸುವ ಬಗ್ಗೆ.

******

**ಉತ್ತರ:** ಅಧಿಕಾರ ವಿಕೇಂದ್ರಿಕರಣ ತತ್ವದಡಿ 3 ಹಂತದ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಅಧಿಕಾರ ವಿಕೇಂದ್ರಿಕರಣಗೊಳಿಸುವ ಉದ್ದೇಶದಿಂದ ಸಂವಿಧಾನದ 73 ನೇ ತಿದ್ದುಪಡಿ ಅನುಸಾರ ರಾಜ್ಯದಲ್ಲಿ **ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ಅನ್ನು ದಿನಾಂಕ:10-05-1993 ರಿಂದ ಜಾರಿಗೊಳಿಸಲಾಗಿರುತ್ತದೆ. ಈ ಅಧಿನಿಯಮದನ್ವಯ ರಚಿಸಲಾಗಿರುವ ಗ್ರಾಮ ಪಂಚಾಯತಿಗಳು, ತಾಲ್ಲೂಕು ಪಂಚಾಯತಿಗಳು ಮತ್ತು ಜಿಲ್ಲಾ ಪಂಚಾಯತಿಗಳು ಸ್ಥಳೀಯ ಸ್ವಯಂ ಆಡಳಿತ ಸಂಸ್ಥೆಗಳಾಗಿ ಕಾರ್ಯನಿರ್ವಹಿಸಬೇಕೆಂಬುದು ಅಧಿನಿಯಮದ ಆಶಯವಾಗಿರುತ್ತದೆ.**

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 240 ರ ಉಪಬಂಧನ್ವಯ ರಾಜ್ಯ ಸರ್ಕಾರ ವಿವಿಧ ಅಭಿವೃದ್ಧಿ ಇಲಾಖೆಗಳ ಕಾರ್ಯಕ್ರಮಗಳ ಅನುಷ್ಠಾನದ ನಿಯಂತ್ರಣ ಹಾಗೂ ಮೇಲ್ವಿಚಾರಣೆಯನ್ನು ಸರ್ಕಾರ ಈಗಾಗಲೇ ಅಧಿನಿಯಮದ ಅನುಸೂಚಿ-I, ಅನುಸೂಚಿ-II ಮತ್ತು ಅನುಸೂಚಿ-III ರಲ್ಲಿ ಅಧಿಸೂಚಿಸಿದೆ.

ಅಭಿವೃದ್ಧಿ ಯೋಜನೆಗಳನ್ನು ಮತ್ತು ಆಯವ್ಯಯ ದಸ್ತಾವೇಜಿನೊಂದಿಗೆ ಹಾಜರುಪಡಿಸಬೇಕಾದ ವಾರ್ಷಿಕ ಹಣಕಾಸು ಪುನರಾವಲೋಕನೆಯನ್ನು ರೂಪಿಸುವುದಕ್ಕೆ ಸರ್ಕಾರವನ್ನು ಸಮರ್ಥಗೊಳಿಸುವುದಕ್ಕೆ ಕರ್ನಾಟಕ ರಾಜ್ಯ ವಿಕೇಂದ್ರಿಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯನ್ನು ರಚಿಸಲಾಗಿದೆ.

**1) ಪ್ರಕಾರ್ಯಗಳು: (FUNCTIONS)**

- ಗ್ರಾಮ ಪಂಚಾಯತಿಯು ಅಭಿವೃದ್ಧಿ ಕಾರ್ಯಕ್ರಮಗಳನ್ನು ಗಮನದಲ್ಲಿಟ್ಟುಕೊಂಡು ಪ್ರತಿ ವರ್ಷವೂ ಅಭಿವೃದ್ಧಿ ಯೋಜನೆಯನ್ನು ಸಿದ್ಧಪಡಿಸಲು ಅವಕಾಶ ಕಲ್ಪಿಸಲಾಗಿದೆ. ಗ್ರಾಮ ಪಂಚಾಯತಿಗಳು ಅಭಿವೃದ್ಧಿಆಧಾರದ ಮೇಲೆ ಪಂಚಾಯತಿ ಪೂರ್ಣ ಅವಧಿಗಾಗಿ ದೂರ ದೃಷ್ಟಿ ಯೋಜನೆಯನ್ನು ಸಿದ್ಧಪಡಿಸಲು ಅವಕಾಶ ಕಲ್ಪಿಸಲಾಗಿದೆ. ತಾಲ್ಲೂಕು ಮತ್ತು ಜಿಲ್ಲಾ ಪಂಚಾಯತಿಗಳು ಯೋಜನೆಗಳನ್ನು ಸಿದ್ಧಪಡಿಸಲು ಅವಕಾಶ ಕಲ್ಪಿಸಲಾಗಿದೆ.

- ತಾಲ್ಲೂಕು ಮಟ್ಟದಲ್ಲಿ ಯೋಜನೆಯ ಸಂಯೋಜನೆಯನ್ನು ಕೈಗೊಳ್ಳುವ ಉದ್ದೇಶಕ್ಕಾಗಿ, ತಾಲ್ಲೂಕು ಯೋಜನೆ ಮತ್ತು ಅಭಿವೃದ್ಧಿ ಸಮಿತಿಯನ್ನು ರಚಿಸಲು ಅವಕಾಶ ಕಲ್ಪಿಸಲಾಗಿದೆ. ಜಿಲ್ಲಾ ಪಂಚಾಯತಿಗಳು ಜಿಲ್ಲೆಗಾಗಿ ಒಂದು ಅಭಿವೃದ್ಧಿ ಯೋಜನೆಯನ್ನು ತಯಾರಿಸಲು ಜಿಲ್ಲಾ ಯೋಜನಾ ಸಮಿತಿಯನ್ನು ರಚಿಸಲು ಅವಕಾಶ ಕಲ್ಪಿಸಲಾಗಿದೆ.

- ಗ್ರಾಮ ಪಂಚಾಯತಿ ಮಟ್ಟದಲ್ಲಿ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಗತಿ ಪರಿಶೀಲನೆ ಮಾಡಲು (ಕೆ.ಡಿ.ಪಿ) ಗ್ರಾಮ ಪಂಚಾಯತಿ ಅಧ್ಯಕ್ಷರ ಅಧ್ಯಕ್ಷತೆಯಲ್ಲಿ ಸಭೆ ನಡೆಸಲಾಗುತ್ತಿದೆ.ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಗತಿ ಪರಿಶೀಲನೆ ಮಾಡಲು ಸಭೆ ನಡೆಸಲು ಅವಕಾಶ ಕಲ್ಪಿಸಲಾಗಿದೆ.

- ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಅಧಿನಿಯಮದಡಿ ಹೆಚ್ಚಿನ ಪ್ರಕಾರ್ಯಗಳನ್ನು ವಹಿಸಲಾಗಿದೆ. ಗ್ರಾಮಾಂತರ ಪ್ರದೇಶದ ಜನರ ಜೀವನ ಮಟ್ಟವನ್ನು ಸುಧಾರಿಸಲು ಹಾಗೂ ಅವರ ದೈನಂದಿನ ಜೀವನಕ್ಕೆ ಬೇಕಾದ ಸೌಕರ್ಯಗಳನ್ನು ಕಲ್ಪಿಸಲು ಗ್ರಾಮ ಪಂಚಾಯತಿಗಳಿಗೆ ಅಧಿಕಾರ ನೀಡಲಾಗಿದೆ. ಗ್ರಾಮ ಪಂಚಾಯತಿಗಳು ತಮ್ಮ ವ್ಯಾಪ್ತಿಯ ಜನರ ಭಾಗವಹಿಸುವಿಕೆ ಮೂಲಕ ಯೋಜನೆಗಳನ್ನು ರೂಪಿಸಲು ಹಾಗೂ ಅವುಗಳನ್ನು ಅನುಷ್ಠಾನಗೊಳಿಸಲು ಅವಕಾಶ ಕಲ್ಪಿಸಲಾಗಿದೆ. ಈ ಉದ್ದೇಶಕ್ಕಾಗಿ ಗ್ರಾಮ ಸ್ವರಾಜ್ ಘಟಕಗಳಾದ ಗ್ರಾಮ ಸಭೆ, ವಾರ್ಡ್ ಸಭೆ ಹಾಗೂ ಜನವಸತಿ ಸಭೆಗಳಿಗೆ ಹೆಚ್ಚಿನ ಅಧಿಕಾರ ನೀಡಲಾಗಿದೆ.

- ಗ್ರಾಮ ಸಭೆಯನ್ನು ಸಂವಿಧಾನ ಆಶಯಕ್ಕನುಗುಣವಾಗಿ ನಡೆಸಲು ಹಾಗೂ ಅವುಗಳ ನಿರ್ಣಯವನ್ನು ಆದ್ಯತೆಯ ಮೇಲೆ ಪರಿಗಣಿಸಲು ಕಾಯ್ದೆಯಲ್ಲಿ ಅವಕಾಶ ಕಲ್ಪಿಸಲಾಗಿದೆ. ಈಗಾಗಲೇ ಈ ಸಂಬಂಧವಾಗಿ ನಿಯಮಗಳನ್ನು ರೂಪಿಸಿದ್ದು, ಗ್ರಾಮ ಸಭೆಗೆ ಗ್ರಾಮ ಸಭೆಯನ್ನು ಮತ್ತಷ್ಟು ಸಶಕ್ತಗೊಳಿಸಲು

ರಾಜ್ಯ ಸರ್ಕಾರವು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಸಭೆ ಕರೆಯುವ ಮತ್ತು ನಡೆಸುವ) ನಿಯಮಗಳು 2024 ಅನ್ನು ಹೊರಡಿಸಿರುತ್ತದೆ.

- ಕೇಂದ್ರ ಮತ್ತು ರಾಜ್ಯ ಸರ್ಕಾರದ ಯೋಜನೆ / ಕಾರ್ಯಕ್ರಮಗಳಾದ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ, 15ನೇ ಹಣಕಾಸು ಯೋಜನೆ, ಜಲಜೀವನ್ ಮಿಷನ್, ಸ್ವಚ್ಛ ಭಾರತ ಅಭಿಯಾನ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

- ಗ್ರಾಮೀಣ ಜನತೆಗೆ ವಿವಿಧ ಇಲಾಖೆಗಳ ಸೇವೆಗಳ ದಾಖಲೆಗಳನ್ನು ತ್ವರಿತವಾಗಿ ಮತ್ತು ಸಮೀಪವಾಗಿ ಒಂದೇ ಸೂರಿನಡಿ ಕಲ್ಪಿಸುವ ಉದ್ದೇಶದಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ವಿವಿಧ ಇಲಾಖೆಗಳ ಸೇವೆಗಳೊಂದಿಗೆ ಆಧಾರ್ ಸೇವೆಗಳನ್ನು ಒದಗಿಸಲು ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಬಾಪೂಜಿ ಸೇವಾ ಕೇಂದ್ರಗಳನ್ನು ಸ್ಥಾಪಿಸಿ 81 ಸೇವೆಗಳನ್ನು ನೀಡಲಾಗುತ್ತಿದೆ. ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ನಾಗರೀಕರಿಗೆ ನೀಡುವ ಸೇವೆಗಳನ್ನು ಸಕಾಲ ವ್ಯಾಪ್ತಿಗೆ ತರಲಾಗಿದೆ.

- ಪಂಚಾಯತ್ ರಾಜ್ ಸಂಸ್ಥೆಗಳು ಪಂಚಾಯತ್ ನೀತಿ ನಿರ್ದೇಶಕ ತತ್ವಗಳನ್ನು ಪ್ರೋತ್ಸಾಹಿಸಲು ಅವಕಾಶ ಕಲ್ಪಿಸಲಾಗಿದೆ. ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳ ಅಧ್ಯಕ್ಷರು ಮತ್ತು ಉಪಾಧ್ಯಕ್ಷರು ಹಾಗೂ ಸದಸ್ಯರುಗಳಿಗೆ ಕರ್ತವ್ಯಗಳು ಮತ್ತು ಜವಾಬ್ದಾರಿಗಳನ್ನು ನಿರ್ದಿಷ್ಟಪಡಿಸಲಾಗಿದೆ.

- ಮಾನ್ಯ ಮುಖ್ಯಮಂತ್ರಿಗಳು 2023-24ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ-1993ರ ಪ್ರಕರಣ 2(28-ಸಿ) ರಡಿ ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳು ಹೊಂದಿರಬಹುದಾದ ಜವಾಬ್ದಾರಿಗಳ ವಿವರವಾದ ಪಟ್ಟಿಯೊಂದಿಗೆ ಜವಾಬ್ದಾರಿ ನಕ್ಷೆ ಸಿದ್ಧಪಡಿಸಲು ಕ್ರಮ ವಹಿಸಲಾಗಿದೆ.

- ಪ್ರಸ್ತುತ ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಪರಿಶಿಷ್ಟ ವರ್ಗಗಳ ಕಲ್ಯಾಣ, ತೋಟಗಾರಿಕೆ, ಹಿಂದುಳಿದ ವರ್ಗಗಳ ಕಲ್ಯಾಣ, , ಜಲಾನಯನ ಅಭಿವೃದ್ಧಿ, ರೇಷ್ಮೆ, ಕೃಷಿ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳಿಗೆ ಸಂಬಂಧಿಸಿದಂತೆ ಜವಾಬ್ದಾರಿ ನಕ್ಷೆಯನ್ನು ಸಿದ್ಧಪಡಿಸಿ ಅಧಿಸೂಚಿಸಲಾಗಿರುತ್ತದೆ. ಇನ್ನುಳಿದ ಇಲಾಖೆಗಳಿಗೆ ಜವಾಬ್ದಾರಿ ನಕ್ಷೆಯನ್ನು ಸಿದ್ಧಪಡಿಸಲು ಕ್ರಮ ವಹಿಸಲಾಗುತ್ತಿದೆ.

## 2) <u>ಅನುದಾನ (Funds):</u>

- ಗ್ರಾಮ ಪಂಚಾಯತಿಗಳು, ತಾಲ್ಲೂಕು ಪಂಚಾಯತಿಗಳು ಮತ್ತು ಜಿಲ್ಲಾ ಪಂಚಾಯತಿಗಳು ಆರ್ಥಿಕವಾಗಿ ಸಧೃಢವಾಗಲು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಹಣಕಾಸು ಆಯೋಗಗಳ ಶಿಫಾರಸ್ಸಿನನ್ವಯ ಅನುದಾನ ನೀಡಲಾಗುತ್ತಿದೆ.

* ರಾಜ್ಯ ಹಣಕಾಸು ಆಯೋಗದ ಶಿಫಾರಸ್ಸಿನಂತೆ ಗ್ರಾಮ ಪಂಚಾಯತಿಗಳಿಗೆ ವಾರ್ಷಿಕವಾಗಿ ಸರಾಸರಿ ಶಾಸನಬದ್ಧ ಅನುದಾನವಾಗಿ ರೂ:20.00 ಲಕ್ಷಗಳ ಅನುದಾನ ನೀಡಲಾಗುತ್ತಿದೆ.

* ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಪ್ರತಿ ಗ್ರಾಮ ಪಂಚಾಯಿತಿಯಲ್ಲಿನ ಕಾರ್ಮಿಕ ಆಯವ್ಯಯ ಆಧರಿಸಿ ಅನುದಾನ ನೀಡಲಾಗುತ್ತಿದೆ.

* ಕೇಂದ್ರ 15ನೇ ಹಣಕಾಸು ಆಯೋಗದ ಅನುದಾನವನ್ನು ಶೇ.90ರಷ್ಟು ಜನಸಂಖ್ಯೆ ಮತ್ತು ಶೇ.10ರಷ್ಟು ಭೌಗೋಳಿಕ ಪ್ರದೇಶದ ಆಧಾರದ ಮೇಲೆ ಬಿಡುಗಡೆಗೊಳಿಸಲಾಗುತ್ತಿದ್ದು, ಪ್ರತಿ ಗ್ರಾಮ ಪಂಚಾಯತಿಗೆ ಸರಾಸರಿ ರೂ:15 ಲಕ್ಷಗಳು, ತಾಲ್ಲೂಕು ಪಂಚಾಯತಿಗಳಿಗೆ ಸರಾಸರಿ ರೂ:11 ಲಕ್ಷಗಳು ಮತ್ತು ಜಿಲ್ಲಾ ಪಂಚಾಯತಿಗಳಿಗೆ ಸರಾಸರಿ ರೂ:1.50ಕೋಟಿಗಳ ಅನುದಾನ ನೀಡಲಾಗುತ್ತಿದೆ.

* ರಾಜ್ಯ ಹಣಕಾಸು ಆಯೋಗದ ಶಿಫಾರಸ್ಸಿನಂತೆ ತಾಲ್ಲೂಕು ಪಂಚಾಯತಿಗಳಿಗೆ ಅಭಿವೃದ್ಧಿ ಅನುದಾನವನ್ನುಶೇ.80ರಷ್ಟು ಜನಸಂಖ್ಯೆ ಮತ್ತು ಶೇ.20ರಷ್ಟು ಭೌಗೋಳಿಕ ಪ್ರದೇಶದ ಆಧಾರದ ಮೇಲೆ ಬಿಡುಗಡೆಗೊಳಿಸಲಾಗುತ್ತಿದ್ದು, ಪ್ರತಿ ತಾಲ್ಲೂಕು ಪಂಚಾಯತಿಗೆ ಸರಾಸರಿ ರೂ:2.00 ಕೋಟಿಗಳು ಮತ್ತು ಜಿಲ್ಲಾ ಪಂಚಾಯತಿಗಳಿಗೆ ಸರಾಸರಿ ರೂ:4.00 ಕೋಟಿಗಳ ಅನುದಾನ ನೀಡಲಾಗುತ್ತಿದೆ.

* ಗ್ರಾಮ ಪಂಚಾಯತಿ ಅಧ್ಯಕ್ಷರಿಗೆ ರೂ.6000/- ಗಳು, ಉಪಾಧ್ಯಕ್ಷರಿಗೆ ರೂ.4000/- ಗಳು ಮತ್ತು ಸದಸ್ಯರಿಗೆ ರೂ.2000/- ಗೌರವಧನ ಮತ್ತು ಉಪವೇಶನ ಶುಲ್ಕ ರೂ.300/- ಗಳನ್ನು ನೀಡಲಾಗುತ್ತಿದೆ.

* ತಾಲ್ಲೂಕು ಪಂಚಾಯತಿ ಅಧ್ಯಕ್ಷರಿಗೆ ರೂ.6000/- ಗಳು, ಉಪಾಧ್ಯಕ್ಷರಿಗೆ ರೂ.4000/- ಗಳು ಮತ್ತು ಸದಸ್ಯರಿಗೆ ರೂ.3000/- ಗೌರವಧನ ಮತ್ತು ಉಪವೇಶನ ಶುಲ್ಕ ರೂ.150/- ಗಳನ್ನು ನೀಡಲಾಗುತ್ತಿದೆ.

* ಜಿಲ್ಲಾ ಪಂಚಾಯತಿ ಅಧ್ಯಕ್ಷರಿಗೆ ರೂ.35000/- ಗಳು, ಉಪಾಧ್ಯಕ್ಷರಿಗೆ ರೂ.15000/- ಗಳು ಮತ್ತು ಸದಸ್ಯರಿಗೆ ರೂ.5000/- ಗೌರವಧನ ಮತ್ತು ಉಪವೇಶನ ಶುಲ್ಕ ರೂ.200/- ಗಳನ್ನು ನೀಡಲಾಗುತ್ತಿದೆ. ಜಿಲ್ಲಾ ಪಂಚಾಯತಿ ಅಧ್ಯಕ್ಷರಿಗೆ ರಾಜ್ಯ ಸಚಿವರ ಸ್ಥಾನಮಾನವನ್ನು ನೀಡಲಾಗಿದೆ. ಅಧ್ಯಕ್ಷರಿಗೆ ವೇತನ ಮತ್ತು ಭತ್ಯೆಗಳನ್ನು ನಿಯಮಾನುಸಾರ ಭರಿಸಲು ಅವಕಾಶ ಕಲ್ಪಿಸಲಾಗಿದೆ.

* ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 267 ರನ್ವಯ ಪ್ರಸ್ತುತ 5 ನೇ ರಾಜ್ಯ ಹಣಕಾಸು ಆಯೋಗ ರಚಿತವಾಗಿದ್ದು, ಸದರಿ ಆಯೋಗವು ಜಿಲ್ಲಾ ಪಂಚಾಯತಿಗಳ, ತಾಲ್ಲೂಕು

ಪಂಚಾಯತಿಗಳ ಮತ್ತು ಗ್ರಾಮ ಪಂಚಾಯತಿಗಳ ಹಣಕಾಸು ಪರಿಸ್ಥಿತಿ ಪರಾಮರ್ಶಿಸಲು ಮತ್ತು ಹಣಕಾಸು ಪರಿಸ್ಥಿತಿಯನ್ನು ಸುಧಾರಿಸಲು ಅವಶ್ಯಕವಾದ ಕ್ರಮಗಳನ್ನು ಕೈಗೊಳ್ಳಲು ಶಿಫಾರಸ್ಸು ಮಾಡಲು ತಿಳಿಸಲಾಗಿದೆ.

- 5ನೇ ರಾಜ್ಯ ಹಣಕಾಸು ಆಯೋಗವು ನೀಡುವ ಶಿಫಾರಸ್ಸಿನ ಆಧಾರದ ಮೇಲೆ ನಿಧಿಯ ಲಭ್ಯತೆಗೆ ಒಳಪಟ್ಟು ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಅನುದಾನವನ್ನು ಒದಗಿಸಲು ಪರಿಶೀಲಿಸಲಾಗುವುದು.

## 3) <u>FUNCTIONARY (ಆಡಳಿತ – ಮಾನವ ಸಂಪನ್ಮೂಲ)</u>

- ರಾಜ್ಯದ ಗ್ರಾಮ ಪಂಚಾಯತಿಗಳಲ್ಲಿ ರಾಜ್ಯ ಸಿವಿಲ್ ಸೇವೆಗೆ ಸೇರಿದ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1/ ಗ್ರೇಡ್-2 ಮತ್ತು ಹೆಚ್ಚಿನ ಆರ್ಥಿಕ ಮತ್ತು ಆಡಳಿತಾತ್ಮಕ ಜವಾಬ್ದಾರಿಯುಳ್ಳ ಗ್ರಾಮ ಪಂಚಾಯತಿಗಳಲ್ಲಿ ದ್ವಿತೀಯ ದರ್ಜೆ ಲೆಕ್ಕ ಸಹಾಯಕರು ಕರ್ತವ್ಯ ನಿರ್ವಹಿಸುತ್ತಿದ್ದಾರೆ.

- ಗ್ರಾಮ ಪಂಚಾಯತಿಗಳ 1500 ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳನ್ನು ಗ್ರೂಪ್-ಬಿ ವೃಂದದ ಹಿರಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳೆಂದು ಉನ್ನತೀಕರಿಸಿ ಮರು ಪದನಾಮೀಕರಿಸಿ ಆದೇಶ ಹೊರಡಿಸಲಾಗಿದೆ.

- ರಾಜ್ಯ ಸಿವಿಲ್ ಸೇವೆಗೆ ಸೇರಿದ ನೌಕರರ ಜೊತೆಗೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 112ರಡಿ ಸಿಬ್ಬಂದಿ ವರ್ಗದ ಮಾದರಿಯಲ್ಲಿ ಮಂಜೂರಾಗಿರುವ 1) ಬಿಲ್ ಕಲೆಕ್ಟರ್, 2) ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್, 3) ವಾಟರ್ ಆಪರೇಟರ್ 4) ಅಟೆಂಡೆಂಟ್ ಮತ್ತು 5) ಕ್ಲೀನರ್ಸ್ ವೃಂದದಲ್ಲಿ ನೌಕರರು ಗ್ರಾಮ ಪಂಚಾಯತಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುತ್ತಾರೆ.

- ತಾಲ್ಲೂಕು ಪಂಚಾಯತಿಗಳಲ್ಲಿ ಅಸಿಸ್ಟೆಂಟ್ ಕಮಿಷನರ್ ದರ್ಜೆಯ ಅಥವಾ ಅದಕ್ಕೆ ಸಮಾನವಾದ ರಾಜ್ಯ ಸರ್ಕಾರಿ ಸೇವೆಯ ಗ್ರೂಪ್-ಎ ಅಧಿಕಾರಿಯಾದ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ, ಗ್ರೂಪ್-ಬಿ ವೃಂದದ ಸಹಾಯಕ ನಿರ್ದೇಶಕರು (ಪಂಚಾಯತ್ ರಾಜ್/ ಗ್ರಾಮೀಣ ಉದ್ಯೋಗ) ಮತ್ತು ಅಧೀನ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿರುತ್ತಾರೆ.

- ಜಿಲ್ಲಾ ಪಂಚಾಯತಿಗಳಲ್ಲಿ ಡೆಪ್ಯುಟಿ ಕಮಿಷನರ್ ದರ್ಜೆಗೆ ಕಡಿಮೆಯಿಲ್ಲದ ಅಧಿಕಾರಿಯಾದ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಉಪ ಕಾರ್ಯದರ್ಶಿಗಳು, ಮುಖ್ಯ ಯೋಜನಾಧಿಕಾರಿ, ಯೋಜನಾ ನಿರ್ದೇಶಕರು, ಮುಖ್ಯ ಲೆಕ್ಕಾಧಿಕಾರಿ, ಸಹಾಯಕ ನಿರ್ದೇಶಕರು (ಆಡಳಿತ) ಮತ್ತು ಅಧೀನ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿರುತ್ತಾರೆ.

ಗ್ರಾಮ ಪಂಚಾಯಿತಿ ನೌಕರರು ಸರ್ಕಾರಿ ನೌಕರರಾಗಿರುವುದಿಲ್ಲ. ಈ ನೌಕರರಿಗೆ ಕಾರ್ಮಿಕ ಇಲಾಖೆಯು ಕಾಲಕಾಲಕ್ಕೆ ನಿಗಧಿಪಡಿಸುವ ಕನಿಷ್ಠ ವೇತನ ಮತ್ತು ತುಟ್ಟಿಭತ್ಯೆಯನ್ನು ಪಾವತಿಸಲಾಗುತ್ತಿದೆ. ಆದುದರಿಂದ ಗ್ರಾಮ ಪಂಚಾಯತಿ ನೌಕರರಿಗೆ ಸಿ ಮತ್ತು ಡಿ ದರ್ಜೆ ಸ್ಥಾನಮಾನ ನೀಡಲು ಆಡಳಿತಾತ್ಮಕವಾಗಿ ಸಾಧ್ಯವಾಗುವುದಿಲ್ಲ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 4 ರಡಿ 5000 ಕ್ಕಿಂತ ಕಡಿಮೆ ಇಲ್ಲದ ಮತ್ತು 7000 ಕ್ಕಿಂತ ಹೆಚ್ಚಿಗೆ ಇಲ್ಲದ ಜನಸಂಖ್ಯೆಯುಳ್ಳ ಗ್ರಾಮವನ್ನು ಅಥವಾ ಗ್ರಾಮಗಳ ಗುಂಪನ್ನು ಗ್ರಾಮ ಪಂಚಾಯಿತಿ ಪ್ರದೇಶವೆಂದು ಘೋಷಿಸಿ ಸ್ಥಾಪನೆ ಮಾಡಲು ಜಿಲ್ಲಾಧಿಕಾರಿಗೆ ಅವಕಾಶವಿರುತ್ತದೆ. ಬೆಳಗಾವಿ, ಚಿಕ್ಕಮಗಳೂರು, ದಕ್ಷಿಣ ಕನ್ನಡ, ಧಾರವಾಡ, ಹಾಸನ, ಕೊಡಗು, ಶಿವಮೊಗ್ಗ, ಉಡುಪಿ, ಹಾವೇರಿ ಮತ್ತು ಉತ್ತರ ಕನ್ನಡ ಜಿಲ್ಲೆಗಳ ಪ್ರದೇಶಗಳಲ್ಲಿ 2500ಕ್ಕಿಂತ ಕಡಿಮೆ ಇಲ್ಲದ ಜನಸಂಖ್ಯೆಯುಳ್ಳ ಪ್ರದೇಶವನ್ನು ಗ್ರಾಮ ಪಂಚಾಯಿತಿ ಪ್ರದೇಶವೆಂದು ಘೋಷಿಸಿ ಸ್ಥಾಪನೆ ಮಾಡಬಹುದಾಗಿದೆ.

ಈ ಅಧಿನಿಯಮದ ಪ್ರಕರಣ 4ರನ್ವಯ ಪ್ರತಿ 400 ಜನಸಂಖ್ಯೆಗೆ ಒಬ್ಬ ಸದಸ್ಯರನ್ನು ನಿಗಧಿಪಡಿಸಲು, ಪ್ರಕರಣ 5(5) ರನ್ವಯ ಗ್ರಾಮ ಪಂಚಾಯಿತಿಗೆ ಪ್ರತಿಯೊಂದು ಚುನಾವಣಾ ಕ್ಷೇತ್ರಕ್ಕೂ ಎಷ್ಟು ಸ್ಥಾನಗಳನ್ನು ಅಂದರೆ ಒಂದು ಅಥವಾ ಅದಕ್ಕೂ ಹೆಚ್ಚಿನ ಸ್ಥಾನಗಳನ್ನು ಹಂಚಿಕೆ ಮಾಡಬಹುದಾಗಿದೆ. ಪ್ರಕರಣ 7ರನ್ವಯ ಗ್ರಾಮ ಪಂಚಾಯಿತಿಗೆ ಚುನಾವಣೆಗಳನ್ನು ಪಕ್ಷದ ಆಧಾರ ರಹಿತವಾಗಿ ಮತದಾನದ ಮೂಲಕ ನಡೆಸಲು ಅವಕಾಶ ಕಲ್ಪಿಸಲಾಗಿದೆ.

ಗ್ರಾಮ ಪಂಚಾಯಿತಿಗಳಿಗೆ ಪಕ್ಷದ ಆಧಾರದ ಮೇಲೆ, ಏಕ ಚುನಾವಣಾ ಕ್ಷೇತ್ರ ನಿಗಧಿ ಮತ್ತು ಪ್ರತಿ 1000 ಜನಸಂಖ್ಯೆಗೆ ಒಬ್ಬ ಸದಸ್ಯರನ್ನು ನಿಗಧಿಪಡಿಸಲು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ಕ್ಕೆ ತಿದ್ದುಪಡಿ ತರುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.

ಸಂಖ್ಯೆ:RDPR 190 GPA 2025

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.